ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಮುತ್ತಿನ ಮುಳ್ಳಸೋಗೆ ಏತ ನೀರಾವರಿ ಯೋಜನೆಯಿಂದ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

ಶ್ರೀ ಎಸ್. ನಾಗರಾಜು(ಸಂದೇಶ್‌ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

590 (582) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪಿರಿಯಾಪಟ್ಟಣ ತಾಲ್ಲೂಕು, ಮುತ್ತಿನ ಮುಳ್ಳಸೋಗೆ ಬಳಿ, ಕಾವೇರಿ ನದಿಯಿಂದ ಏತ ನೀರಾವರಿ ಯೋಜನೆ ಮೂಲಕ ಎಷ್ಟು ಕೆರೆ ಕಟ್ಟೆಗಳಿಗೆ ನೀರು ತುಂಬಿಸಲು ಯೋಜನೆಯನ್ನು ಸಿದ್ಧಪಡಿಸಲಾಗಿದೆ;

(ಆ) ಈ ಯೋಜನೆಯ ಅಂದಾಜು ವೆಚ್ಚ ಎಷ್ಟು; ಈಗ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿವೆ; ಉಳಿದ ಕಾಮಗಾರಿಗಳು ಯಾವ ಹಂತದಲ್ಲಿದೆ; ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ; ನಿಧಾನಗತಿಯಿಂದ ಸಾಗಿರುವ ಈ ಯೋಜನೆಯನ್ನು ಬೇಗ ಪೂರ್ಣಗೊಳಿಸಲು ಕ್ರಮ ಜರುಗಿಸಲಾಗುವುದೇ?